ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1
ಸಂಖ್ಯೆ:-ಸಿ1(4)ವರ್ಗಾವಣೆ: 01/2011-12 ದಿನಾಂಕ: 08-06-2011

<u>ಅಧಿಕೃತ ಜ್ಞಾಪನ</u>

ವಿಷಯ:-2011-12ನೇ ಶೈಕ್ಷಣಿಕ ಸಾಲಿನ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ವೃಂದದ ಅಂತರ ಘಟಕ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ.

ಉಲ್ಲೇಖ:-1.ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 1 ಶಾಸನ 2007 ದಿ:01.09.2007
2.ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 173 ಇಟಿಆರ್ 2007 ದಿ:15.10.2007
3.ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 173 ಇಟಿಆರ್ 2007 ದಿ:14.11.2007
4.ಸರ್ಕಾರದ ಆದೇಶ ಸಂಖ್ಯೆ:ಇಡಿ 7 ಇಟಿಆರ್ 2011 ದಿ: 20.04.2011
5.ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಇಟಿಆರ್ 2009 ದಿ:23.04.2011.
6.ಈ ಕಛೇರಿಯ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿ:26.04.2011, 10.05.2011
7.ದಿನಾಂಕ 03.06.2011ರಂದು ನಡೆದ ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆ

-&&&-

<u>ಪ್ರಸ್ತಾವನೆ:-</u>

ಉಲ್ಲೇಖ-1ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2007 ಜಾರಿಗೆ ಬಂದಿರುತ್ತದೆ. ಇದರ ಅನ್ವಯ ಉಲ್ಲೇಖ-2ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ನ್ನು ರೂಪಿಸಲಾಗಿದೆ. ಉಲ್ಲೇಖ-3ರ ಸರ್ಕಾರದ ಅಧಿಸೂಚನೆಯಲ್ಲಿ ಎ, ಬಿ, ಸಿ, ವಲಯದ ವರ್ಗೀಕರಣದ ಪ್ರದೇಶ ಹಾಗೂ ವ್ಯಾಪ್ತಿಯನ್ನು ಅಧಿಸೂಚಿಸಲಾಗಿದೆ. ಉಲ್ಲೇಖ-4ರಲ್ಲಿ 2011ರ ಸಾಲಿನ ಮಟ್ಟಿಗೆ ಏಪ್ರಿಲ್ ಮತ್ತು ಮೇ ತಿಂಗಳ ಜೊತೆಗೆ ಜೂನ್ 18ರೊಳಗೆ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಪೂರ್ಣ ಗೊಳಿಸಲು ಆದೇಶಿಸಲಾಗಿದೆ. ಉಲ್ಲೇಖ-5ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007 ರಲ್ಲಿನ ಕೆಲವೊಂದು ಅಂಶಗಳಿಗೆ ತಿದ್ದುಪಡಿ/ಮಾರ್ಪಾಡು/ಸೇರ್ಪಡೆ ಮಾಡಲಾಗಿದೆ.

ಉಲ್ಲೇಖ-1ರಿಂದ 5ರವರೆಗಿನ ಆದೇಶಗಳಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳ ವರ್ಗಾವಣೆಗಳನ್ನು 2011ರ ಎಪ್ರಿಲ್ / ಮೇ ಮತ್ತು ಜೂನ್ ಮಾಹೆಯಲ್ಲಿ ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆ ಮೂಲಕ ಮಾಡುವ ಬಗ್ಗೆ ಮಾರ್ಗಸೂಚಿ ಹಾಗೂ ವೇಳಾಪಟ್ಟಿಯನ್ನು ಉಲ್ಲೇಖ-6 ರಲ್ಲಿ ಹೊರಡಿಸಲಾಗಿತ್ತು.

ಮಾರ್ಗಸೂಚಿ ಹಾಗೂ ವೇಳಾಪಟ್ಟಿಯನ್ವಯ 2011-12ನೇ ಶೈಕ್ಷಣಿಕ ಸಾಲಿನ ವರ್ಗಾವಣೆಯ ಅಂತಿಮ ಆದ್ಯತಾ ಪಟ್ಟಿಯಲ್ಲಿನ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳಿಗೆ ಉಲ್ಲೇಖ-7ರಂತೆ ದಿನಾಂಕ: 03-06-2011 ರಂದು ಅಂತರ ಘಟಕ ವಗಾವಣೆಗೆ ಸ್ಥಳ ಆಯ್ಕೆ ಪ್ರಕ್ರಿಯೆ ನಡೆಸಲಾಗಿದ್ದು, ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ವರ್ಗಾವಣೆಗೆ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ಸ್ಥಳನಿಯುಕ್ತಿಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಆದೇಶ:–

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೆಳಕಂಡ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್–ಬಿ ವೃಂದದ ಅಧಿಕಾರಿಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ: | ಕೆ.ಜಿ.ಐ.ಡಿ ಸಂಖ್ಯೆ: | ಅಧಿಕಾರಿಗಳ ಹೆಸರು, ಹುದ್ದೆ ಮತ್ತು ವಿಳಾಸ ಶ್ರೀ / ಶ್ರೀಮತಿ | ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಆಯ್ಕೆ ಮಾಡಿ ಕೊಂಡಂತೆ ವರ್ಗಾವಣೆ ಮಾಡಿರುವ ಹುದ್ದೆ ಮತ್ತು ಸ್ಥಳ |
|---|---|---|---|
| 1. | 2 | 3 | 4 |
| 1 | 997924 | ಗಣಪತಿಯಪ್ಪ ಎಂ., ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಲಂಬಾಪುರ, ಸಿದ್ದಾಪುರ ತಾಲ್ಲೂಕು, ಶಿರಸಿ, ಬೆಳಗಾಂ ವಿಭಾಗ. | ಉಪ ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಸಾಗರ, ಶಿವಮೊಗ್ಗ ಜಿಲ್ಲೆ. |
| 2 | 1193902 | ಗಂಗಾಧರಪ್ಪ ಹೆಚ್., ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಅನ್ಮೋಡ್, ಜೋಯಿಡಾ, ಶಿರಸಿ ಜಿಲ್ಲೆ, ಬೆಳಗಾಂ ವಿಭಾಗ. | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಕಲಮರಹಳ್ಳಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. |
| 3 | 882207 | ಓಂಕಾರಯ್ಯ ಎಸ್., ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಕೊಣ್ಣನತಂಬಗಿ, ಹಾವೇರಿ ತಾಲ್ಲೂಕು, ಹಾವೇರಿ ಜಿಲ್ಲೆ, | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ದೇವಿಕೆರೆ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ. |
| 4 | 998206 | ಚಿನ್ಮಯ ರೆಡ್ಡಿ ಟಿ., ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಕಂಚಿನೆಗಳೂರು, ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ, ಬೆಳಗಾಂ ವಿಭಾಗ. | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಗಟ್ಟಿ ಹೊಸಹಳ್ಳಿ, ಹೊಳಲ್ಕೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ. |
| 5 | 1175175 | ಬಸವರಾಜಪ್ಪ ಹೆಚ್.ಜಿ., ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಮರೋಳ್, ಹಾವೇರಿ ತಾಲ್ಲೂಕು ಮತ್ತು ಜಿಲ್ಲೆ, ಬೆಳಗಾಂ ವಿಭಾಗ. | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಕಂಗುವಳ್ಳಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. |
| 6 | 1278792 | ಗೊಡ್ಡಪ್ಪ ಡಿ., ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಎಸ್.ಸಿ.ಹೆಚ್. ಹೋತನಹಳ್ಳಿ, ಶಿಗ್ಗಾಂವ್ ತಾಲ್ಲೂಕು, ಹಾವೇರಿ ಜಿಲ್ಲೆ, ಬೆಳಗಾಂ ವಿಭಾಗ. | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಮೈದೂರು, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ. |
| 7 | 1311931 | ಕೃಷ್ಣಾ ನಾಯ್ಕ ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ವೆಂಕಟಗಿರಿ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಗುಲ್ಬರ್ಗಾ ವಿಭಾಗ | ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ, ಸಿದ್ದಯ್ಯನ ಕೋಟೆ, ಮೊಳಕಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. |

ಷರತ್ತುಗಳು:–

1. ಕೋರಿಕೆ ವರ್ಗಾವಣೆಯಾಗಿರುವುದರಿಂದ ವರ್ಗಾವಣೆಗೊಂಡ ಅಧಿಕಾರಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

2. ಅಧಿಕಾರಿಗಳ ಕೋರಿಕೆ ಮೇರೆಗೆ ವರ್ಗಾವಣೆಗೆ ಅವಕಾಶ ನೀಡಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲಾಗಿದ್ದು, ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.
3. ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದುವ ಪೂರ್ವದಲ್ಲಿ ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು/ಉಪನಿದೇಶಕರು (ಆಡಳಿತ) ರವರ ಅನುಮತಿ ಪಡೆದು ಬಿಡುಗಡೆ ಹೊಂದಲು ತಿಳಿಸಿದೆ.
4. ನಿಯಂತ್ರಣಾಧಿಕಾರಿಗಳು/ಉಪನಿರ್ದೇಶಕರು (ಆಡಳಿತ) (ಅಭಿವೃದ್ಧಿ) ರವರು ವರ್ಗಾವಣೆ ಹೊಂದಿರುವ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳನ್ನು ಬಿಡುಗಡೆ ಮಾಡುವಾಗ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2007ರ ನಿಯಮ 15ರನ್ವಯ ಸೇವಾ ವಿವರವನ್ನು ಪರಿಶೀಲಿಸಿ ಬಿಡುಗಡೆ ಆದೇಶ ನೀಡಲು ತಿಳಿಸಿದೆ.
5. 15ನೇ ನಿಯಮದಡಿಯಲ್ಲಿ ಬಿಡುಗಡೆಯಾದಂತ ಮುಖ್ಯ ಶಿಕ್ಷಕರ ವೃಂದದ ಅಧಿಕಾರಿಗಳು ಮುಂದಿನ ಮೂರು ವರ್ಷಗಳ ಅವಧಿಯವರೆಗೆ ವಗಾವಣೆಗೆ ಸಂಬಂಧಿಸಿದಂತೆ 11ನೇ ನಿಯಮದಡಿಯಲ್ಲಿ ಕೌನ್ಸಿಲಿಂಗ್‌ಗೆ ಅರ್ಹರಾಗಿರತಕ್ಕದ್ದಲ್ಲ.
6. ವರ್ಗಾವಣೆ ಹೊಂದಿರುವ ಅಧಿಕಾರಿಗಳು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.
7. ವರ್ಗಾವಣೆ ಅರ್ಜಿಯಲ್ಲಿ ತಪ್ಪು ಮಾಹಿತಿ ನಿಡಿದ್ದಲ್ಲಿ ಅಂತಹ ಅಧಿಕಾರಿಯನ್ನೇ ಪೂರ್ಣ ಜವಾಬ್ದಾರರನ್ನಾಗಿ ಪರಿಗಣಿಸಿ, ತಪ್ಪು ಮಾಹಿತಿ ನೀಡಿದ ಕಾರಣಕ್ಕಾಗಿ ಅವರ ಮೇಲೆ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.

ಕೆ.ಆರ್. ಶಶಿಧರ 08/6/2011

(ಕೆ.ಆರ್. ಶಶಿಧರ )

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು

ಗೆ,

1. ಸಂಬಂಧಿಸಿದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳಿಗೆ,

ಪ್ರತಿಯನ್ನು

1. ಸರ್ಕಾರದ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಡಿ ಕಟ್ಟಡ, ಬೆಂಗಳೂರು
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು
3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ಸಂಬಂಧಿಸಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
8. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪ್ರಾದೇಶಿಕ ಪರೀಕ್ಷಾ ಮಂಡಳಿ. ಮೈಸೂರು, ಬೆಳಗಾವಿ, ಗುಲ್ಬರ್ಗಾ
9. ರಾಜ್ಯದ ಎಲ್ಲಾ ಸಿ.ಟಿ.ಇ ಪ್ರಾಂಶುಪಾಲರುಗಳಿಗೆ.
10. ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರಿಗೆ (ಆಡಳಿತ)
11. ಸಂಬಂಧಿಸಿದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ
12. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
13. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
14. ಸಂಬಂಧಿಸಿದ ಶಾಲಾ/ಕಾಲೇಜು/ಕಛೇರಿ ಮುಖ್ಯಸ್ಥರಿಗೆ
15. ಕಛೇರಿ ಪ್ರತಿ. F:\e-data\C1[4]\Trans-outofunit2011.doc